# ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ

## ಬಸವ ಭವನ, ಹೈಗ್ರೌಂಡ್ಸ್, ಬೆಂಗಳೂರು – 560 001.

ಸಂಖ್ಯೆ:ಕರಾಆ:ಲೆಕ್ಕ:56:2008–09 ದಿನಾಂಕ:23.08.2019

### ಟೆಂಡರ್ ಅಧಿಸೂಚನೆ

ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಕಛೇರಿ ಸ್ವಚ್ಛತೆ ಕೆಲಸವನ್ನು ನಿರ್ವಹಿಸಲು ಒಬ್ಬ ಅಕುಶಲ ಕೆಲಸದಾಳುವಿನ ಸೇವೆಯನ್ನು ಎರಡು ವರ್ಷಗಳ ಗುತ್ತಿಗೆ ಆಧಾರದ ಮೇಲೆ ಪಡೆಯುವ ಸಲುವಾಗಿ ಮಾನವ ಸಂಪನ್ಮೂಲ ಸೇವೆಯನ್ನು ಒದಗಿಸುವ ಸಂಸ್ಥೆಗಳಿಂದ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗೊಳಪಟ್ಟು ಟೆಂಡರ್‌ನ್ನು ಆಹ್ವಾನಿಸಲಾಗಿದೆ.

1) ಕರ್ನಾಟಕ ರಾಜ್ಯ ಆಯೋಗದ ನೆಲಮಹಡಿ, ನಾಲ್ಕನೇ ಮಹಡಿ ಮತ್ತು ಶೌಚಾಲಯಗಳ ಸ್ವಚ್ಛತೆ ಕಾರ್ಯವನ್ನು ನಿರ್ವಹಿಸುವುದು.
2) ಮಾನವ ಸಂಪನ್ಮೂಲ ಸೇವೆಯನ್ನು ಒದಗಿಸುವ ಸಂಸ್ಥೆಯು ತನ್ನ ಅಕುಶಲ ಕೆಲಸದಾಳನ್ನು ಕರ್ನಾಟಕ ರಾಜ್ಯ ಆಯೋಗದ ಸ್ವಚ್ಛತೆ ಕಾರ್ಯವನ್ನು ನಿರ್ವಹಿಸಲು ಬೆಳಗ್ಗೆ 9.30 ಗಂಟೆಯೊಳಗೆ ಕಛೇರಿ ಕಾರ್ಯನಿರ್ವಹಿಸುವ ದಿನಗಳಿಗೆ ನಿಯೋಜನೆ ಮಾಡುವುದು.
3) ಸೇವಾ ಗುತ್ತಿಗೆಯನ್ನು ಉಪ ಗುತ್ತಿಗೆ ನೀಡುವಂತಿಲ್ಲ
4) ಸೇವಾ ಗುತ್ತಿಗೆ ಒದಗಿಸುವ ಸಂಸ್ಥೆಯು, ಸ್ವಚ್ಛತೆ ಕಾರ್ಯಕ್ಕೆ ಬೇಕಾಗುವ ಎಲ್ಲಾ ಪರಿಕರಗಳನ್ನು ಒದಗಿಸಿದ್ದಲ್ಲಿ ಆಗುವ ವೆಚ್ಚವನ್ನು ಪ್ರತ್ಯೇಕವಾಗಿ ನಮೂದಿಸುವುದು.
5) ಮಾನವ ಸಂಪನ್ಮೂಲ ಸೇವೆಯನ್ನು ಒದಗಿಸುವ ಸಂಸ್ಥೆಗಳು ಸರ್ಕಾರದಿಂದ ಮಾನ್ಯತೆ ಪಡೆದಿರಬೇಕು.
6) ಮಾನವ ಸಂಪನ್ಮೂಲ ಸೇವೆಯನ್ನು ಒದಗಿಸುವ ಸಂಸ್ಥೆಗಳು ದರಪಟ್ಟಿಗಳನ್ನು ಕನಿಷ್ಠ ವೇತನ ಕಾಯ್ದೆಯನ್ವಯ ಸಂಭಾವನೆ, ಪಿಎಫ್, ಇಎಸ್‌ಐ, ಜಿ.ಎಸ್.ಟಿ ಮತ್ತು ಸರ್ವಿಸ್ ಚರ್ಜಸ್‌ನ್ನು ಪ್ರತ್ಯೇಕವಾಗಿ ಒದಗಿಸುವುದು.
7) ಸೇವಾ ಗುತ್ತಿಗೆಯನ್ನು ಪಡೆಯಲು ಯಶಸ್ವಿಯಾದ ಸಂಸ್ಥೆಯು ಒಟ್ಟು ಮೊತ್ತದ ಶೇ5% ಮೊತ್ತವನ್ನು ಭದ್ರತಾ ಠೇವಣಿಯಾಗಿ ಅಧ್ಯಕ್ಷರು ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಇವರ ಹೆಸರಿನಲ್ಲಿ ಡಿ.ಡಿಯನ್ನು ಒದಗಿಸಬೇಕಾಗಿರುತ್ತದೆ.
8) ಟೆಂಡರ್‌ನ್ನು ಅಂಗೀಕರಿಸುವ/ತಿರಸ್ಕರಿಸುವ/ಯಾವುದೇ ಕಾರಣವನ್ನು ನೀಡದೇ ಮುಂದೂಡುವ ಅಥವಾ ರದ್ದುಪಡಿಸುವ ಅಧಿಕಾರವು ರಾಜ್ಯ ಆಯೋಗದ ಮಾನ್ಯ ಅಧ್ಯಕ್ಷರಿಗಿರುತ್ತದೆ.
9) ಮಾನವ ಸಂಪನ್ಮೂಲ ಸೇವೆಯನ್ನು ಒದಗಿಸುವ ಸಂಸ್ಥೆಯ ಸೇವೆಯು ತೃಪ್ತಿಕಾರವಾಗಿರದಿದ್ದಲ್ಲಿ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು
10) ದರಪಟ್ಟಿಗಳನ್ನು ಮುಚ್ಚಿದ ಲಕೋಟೆಯಲ್ಲಿ ದಿನಾಂಕ:06–09–2021ರ ಸಂಜೆ 5.30 ಗಂಟೆಯೊಳಗೆ ರಾಜ್ಯ ಆಯೋಗಕ್ಕೆ ತಲುಪುವಂತೆ ಸಲ್ಲಿಸುವುದು. ದಿನಾಂಕ:06–09–2021ರ ನಂತರ ಬರುವ ದರಪಟ್ಟಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

11) ಸ್ವೀಕೃತವಾದ ದರಪಟ್ಟಿಗಳನ್ನು ದಿನಾಂಕ:07-09-2021ರಂದು ಪೂರ್ವಾಹ್ನ 11.00 ಗಂಟೆಗೆ ಮಾನ್ಯ ರಿಜಿಸ್ಟ್ರಾರ್ ಮತ್ತು ಆಡಳಿತಾಧಿಕಾರಿಗಳ ಸಮ್ಮುಖದಲ್ಲಿ ತೆರೆದು ಮುಂದಿನ ಕ್ರಮವಹಿಸಲಾಗುವುದು.
12) ಹೆಚ್ಚಿನ ಮಾಹಿತಿಗಾಗಿ ರಾಜ್ಯ ಆಯೋಗದ ಕಛೇರಿಗೆ ಖುದ್ದಾಗಿ ಹಾಜರಾಗಿ ಮಾಹಿತಿಯನ್ನು ಪಡೆಯುವುದು ಅಥವಾ ದೂರವಾಣಿ ಮೂಲಕ ಸಂಪರ್ಕಿಸುವುದು.

ಮಾನ್ಯ ಅಧ್ಯಕ್ಷರ ಆದೇಶಾನುಸಾರ

23/8/21

**(ರಿಜಿಸ್ಟ್ರಾರ್ ಮತ್ತು ಆಡಳಿತಾಧಿಕಾರಿಗಳು)**
ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ
ಪರಿಹಾರ ಆಯೋಗ ಬೆಂಗಳೂರು.

**ಪ್ರತಿಗಳು :-**

1. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು. ಈ ಟೆಂಡರ್ ಅಧಿಸೂಚನೆಯನ್ನು ತುರ್ತಾಗಿ ಕರ್ನಾಟಕದ 3 ದಿನಪತ್ರಿಕೆಯಲ್ಲಿ (ಈ ಸಂಜೆ -ಬೆಂಗಳೂರು, ವಿಜಯ ಕರ್ನಾಟಕ-ಕರ್ನಾಟಕ ಮತ್ತು ದಿ ಹಿಂದೂ-ಕರ್ನಾಟಕ) ಉಚಿತ / ಪಾವತಿ ಆಧಾರದ ಮೇಲೆ ಪ್ರಕಟಿಸಿ, ಪ್ರಕಟಣೆಗೊಂಡ ಪ್ರತಿಗಳನ್ನು ರಾಜ್ಯ ಆಯೋಗಕ್ಕೆ ಕಳುಹಿಸಿಕೊಡುವಂತೆ ಕೋರಲಾಗಿದೆ.
2. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಬೆಂಗಳೂರು ಸೂಚನಾ ಫಲಕದಲ್ಲಿ ಪ್ರಕಟಿಸಲು ಈ ಮೂಲಕ ಕೋರಲಾಗಿದೆ
3. ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಸೂಚನಾ ಫಲಕದಲ್ಲಿ ಪ್ರಕಟಿಸಲು ಈ ಮೂಲಕ ಕೋರಲಾಗಿದೆ
4. ರಿಜಿಸ್ಟ್ರಾರ್, ಬೆಂಗಳೂರು ನಗರ ಸಿವಿಲ್ ನ್ಯಾಯಾಲಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಈ ಮೂಲಕ ಕೋರಲಾಗಿದೆ
5. ರಿಜಿಸ್ಟ್ರಾರ್ ಮತ್ತು ಆಡಳಿತಾಧಿಕಾರಿಗಳು, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಬಸವ ಭವನ, ಬೆಂಗಳೂರು-560 001 ( ಮಾಹಿತಿಗಾಗಿ ಹಾಗೂ ಸೂಚನಾ ಫಲಕದಲ್ಲಿ ಪ್ರಕಟಿಸುವ ಸಲುವಾಗಿ).
6. ಅಧ್ಯಕ್ಷರು, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ಬೆಂಗಳೂರು ನಗರ 1ನೇ ಹೆಚ್ಚುವರಿ, ಬೆಂಗಳೂರು ನಗರ 2ನೇ ಹೆಚ್ಚುವರಿ, ಬೆಂಗಳೂರು ನಗರ 3ನೇ ಹೆಚ್ಚುವರಿ, ಬೆಂಗಳೂರು ನಗರ 4ನೇ ಹೆಚ್ಚುವರಿ ಜಿಲ್ಲಾ ವೇದಿಕೆಯ ಸೂಚನಾ ಫಲಕದಲ್ಲಿ ಪ್ರಕಟಿಸುವ ಬಗ್ಗೆ ಹಾಗೂ ಹೆಚ್ಚಿನ ಜಾಹಿರಾತಿನ ಸಲುವಾಗಿ ಇನ್ನಿತರ ಸೂಕ್ತ ಸ್ಥಳಗಳಲ್ಲಿ ಪ್ರಕಟಿಸುವ ಬಗ್ಗೆ ಅಗತ್ಯ ಕ್ರಮವಹಿಸುವುದು
7. ಕಛೇರಿ ಪ್ರತಿ.